ಶಿಕ್ಷಕರ ಕೊರತೆ

647(186): ಶ್ರೀ ಮೊಹಿಯುದ್ದೀನ್ ಭಾವಾ ಬಿ.ಎ. (ಮಂಗಳೂರು ನಗರ)

ಅ) ರಾಜ್ಯದಲ್ಲಿರುವ ಅನುದಾನಿತ ಮತ್ತು ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕೊರತೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು;

ಇ) ಮಂಗಳೂರು ಉತ್ತರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಅನುದಾನಿತ ಮತ್ತು ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದಾಗಿ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಶಿಕ್ಷಕರ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಸರ್ಕಾರಿ ಶಾಲೆಗಳಿಗೆ ಸಂಬಂಧಿಸಿದಂತೆ ಶಿಕ್ಷಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಅ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 17738 ಮತ್ತು ಸರ್ಕಾರಿ ಪ್ರೌಢಶಾಲೆಗಳಲ್ಲಿ 1397 ಹುದ್ದೆಗಳು ಖಾಲಿಯಿರುತ್ತವೆ.

ಇ) ಸರ್ಕಾರಿ ಶಾಲೆಗೆ ಸಂಬಂಧಿಸಿದಂತೆ ಗಮನಕ್ಕೆ ಬಂದಿದೆ.

ಈ) ಪ್ರಸಕ್ತ ಸಾಲಿನಲ್ಲಿ ಶಿಕ್ಷಕರ ಕೊರತೆಯನ್ನು ನೀಗಿಸಲು ಸರ್ಕಾರಿ ಪ್ರಾಥಮಿಕ 9405 ಮತ್ತು ಪ್ರೌಢಶಾಲೆಗೆ 1137 ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಸರ್ಕಾರವು ಅನುಮತಿ ನೀಡಿದೆ. ಹಾಗೂ ಜೂನ್ 2014ರಿಂದ ನಿವೃತ್ತಿಯಾಗಲಿರುವ ಪ್ರಾಥಮಿಕ/ಪ್ರೌಢಶಾಲಾ ಶಿಕ್ಷಕರನ್ನು, ಹುದ್ದೆಗಳನ್ನು ಭರ್ತಿ ಮಾಡುವವರೆಗೆ ಸೇವೆಯಲ್ಲಿ ಮುಂದುವರೆಸಲು ಆದೇಶ ಹೊರಡಿಸಲಾಗಿದೆ.